VOLUME: 16 | 06 MAY 2026 | ಬುಧವಾರ | RS: 2 | PAGE: 06 ISSUE: 89 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ನಟ ವಿಜಯ್ ಅವರ ಈ ಭರ್ಜರಿ ಗೆಲುವಿನ ಬಗ್ಗೆ ನಟಿ ಪೂಜಾ ಹೆಗ್ಡೆ ಅವರು ಬಹಳ ಹಿಂದೆಯೇ ನುಡಿದಿದ್ದ ಭವಿಷ್ಯ ಈಗ ಅಕ್ಷರಶಃ ನಿಜವಾಗಿದ್ದು, ಎಲ್ಲರ ಗಮನ ಸೆಳೆಯುತ್ತಿದೆ. ನಟ ವಿಜಯ್ ಹಾಗೂ ಪೂಜಾ ಹೆಗ್ಡೆ ಅಭಿನಯದ 'ಜನ ನಾಯಗನ್' ಚಿತ್ರದ ಶೂಟಿಂಗ್ ಸೆಟ್‌ನ ಹಳೆಯ ವಿಡಿಯೋವೊಂದನ್ನು ಪೂಜಾ ಅವರು ಹಂಚಿಕೊಂಡಿದ್ದು, ಇದೀಗ ವೈರಲ್ ಆಗಿದೆ.



BHARATHA SARATHI
KANNADA DAILY NEWS PAPER
# ಭಾರತ ಸಾರಥಿ
CALL 9740160669
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಬಿಜೆಪಿಯಿಂದ ವೋಟ್ ಚೋರಿ ಆಗಿದೆ: ಸಿದ್ದರಾಮಯ್ಯ

ಎಣಿಕೆ ಮಾಡಿದ ಬಳಿಕ ಎಲ್ಲಾ ದಾಖಲಾತಿಗಳನ್ನು ಟ್ರಂಕ್ ನಲ್ಲಿಡಲಾಗುತ್ತದೆ. ಮತ ಎಣಿಕೆಯಾಗುವಾಗ ಬಿಜೆಪಿ ಸರ್ಕಾರವಿತ್ತು. ಕೇಂದ್ರದಲ್ಲೂ ಅವರ ಸರ್ಕಾರ ಇತ್ತು. ಅವರು ಹೇಳುವ ಪ್ರಕಾರ ಡಬಲ್ ಇಂಜಿನ್ ಸರ್ಕಾರ ಇತ್ತು. ಬಿಜೆಪಿಯವರು ಸಿಬ್ಬಂದಿ ಮೂಲಕ ಮತಪತ್ರಗಳನ್ನು ತಿದ್ದಿರುವುದು ಖಚಿತವಾಗಿದೆ. ಇದು ಕ್ರಿಮಿನಲ್ ಸಂಚು. ರಾಜೇಗೌಡರಿಗೆ ಮೂರನೇ ಸುತ್ತಿನಲ್ಲಿ ಲಭಿಸಿದ್ದ ಎಲ್ಲಾ 170 ಅಂಚೆ ಮತಗಳು ಈಗ ಅನರ್ಹವಾಗಿವೆ. ಅವು ಹಿಂದೆ ಮತ ಎಣಿಕೆ ಮಾಡಿದಾಗ ಅರ್ಹವಾಗಿ ಪರಿಗಣಿಸಲಾಗಿತ್ತು. ನಮ್ಮ ಪಕ್ಷದಿಂದ ಸುಧೀರ್ ಕುಮಾರ್ ಮರೋಳಿ ಅವರು ಏಜೆಂಟ್ ಆಗಿದ್ದರು. ಎಲ್ಲಾ ಏಜೆಂಟರು 2023ರಲ್ಲಿ ಸಹಿ ಹಾಕಿದ ದಾಖಲೆಯಿದೆ. ಮತಗಳು ಅನರ್ಹವಾಗಿದ್ದರೆ ಆಗಲೇ ಎಲ್ಲರೂ ಆಕ್ಷೇಪ ಎತ್ತಬಹುದಾಗಿತ್ತು. ಆಗ ಯಾರೂ ಆಕ್ಷೇಪ ಎತ್ತಲಿಲ್ಲ ಯಾಕೆ? ಎಂದು ಸಿಎಂ ಪ್ರಶ್ನಿಸಿದರು.



ಬೆಂಗಳೂರು: ಶೃಂಗೇರಿ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ರಾಜೇಗೌಡ ಅವರು ಕಳೆದ ಚುನಾವಣೆಯಲ್ಲಿ 201 ಮತಗಳ ಅಂತರದಲ್ಲಿ ಗೆದ್ದಿದ್ದು, ಅವರಿಗೆ 59,171 ಮತಗಳು ಲಭಿಸಿದ್ದವು. ಬಿಜೆಪಿಯ ಜೀವರಾಜ್ ಅವರಿಗೆ 58970 ಮತಗಳು ಬಂದಿದ್ದವು. ಮರು ಎಣಿಕೆಯಲ್ಲಿ ರಾಜೇಗೌಡರಿಗೆ 314 ಮತಗಳು ಮಾತ್ರ ಅರ್ಹ ಎಂದು ಆಗುತ್ತದೆ. 255 ಮತಗಳು ಅನರ್ಹ ಎಂದು ಆಗುತ್ತದೆ. ಜೀವರಾಜ್ ಅವರಿಗೆ ಮರು ಎಣಿಕೆಯಲ್ಲಿ 690 ಮತಗಳು ಲಭಿಸಿವೆ. ಬಿಜೆಪಿಯವರು ಕ್ರಿಮಿನಲ್ ಸಂಚು ಮಾಡಿ ವೋಟ್ ಚೋರಿ ಮಾಡಿರುವುದು ಇದರಿಂದ ಬಹಳ ಸ್ಪಷ್ಟವಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಇಂದು ಕೃಷ್ಣಾದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ರಾಜೇಗೌಡರಿಗೆ ಬಿದ್ದಿದ್ದ 250 ಮತಗಳನ್ನು ವ್ಯವಸ್ಥಿತವಾಗಿ ತಿದ್ದಲಾಗಿದೆ. ಇದು ವೋಟ್ ಡಕಾಯಿತಿಯಾಗಿದೆ. ಇವಿಎಂನಲ್ಲಿ ರಾಜೇಗೌಡರಿಗೆ 58602ಮತಗಳು, ಅಂಚೆಯಲ್ಲಿ 569 ಮತಗಳು ಬಂದಿದ್ದವು. ಜೀವರಾಜ್ ಅವರಿಗೆ ಇವಿಎಂನಲ್ಲಿ 58278 ಮತಗಳು ಬಂದಿದ್ದವು. ಅಂಚೆಯಲ್ಲಿ 692 ಮತಗಳು ಬಂದಿದ್ದವು. ಇವೆಲ್ಲವೂ ಅರ್ಹ ಮತಗಳೆಂದು ಚುನಾವಣಾಧಿಕಾರಿಗಳು, ಏಜೆಂಟ್ ಗಳು ಸಹಿ ಮಾಡಿ ಫಲಿತಾಂಶ ಘೋಷಿಸಿದ್ದರು. ಘೋಷಣೆ ಆದ ಬಳಿಕ ಜೀವರಾಜ್ ಅವರು ಅಕ್ರಮ ಆಗಿದೆ ಎಂದು ರಾಜ್ಯ ಹೈಕೋರ್ಟ್ ನಲ್ಲಿ ಮರು ಎಣಿಕೆಗೆ ದಾವೆ ಹೂಡಿದ್ದರು. ಅವರ ಅರ್ಜಿಯನ್ನು ಪುರಸ್ಕರಿಸಿ ನ್ಯಾಯಾಲಯ, 6-03-26ರಲ್ಲಿ ಮರು ಎಣಿಕೆಗೆ ನಿರ್ದೇಶನ ನೀಡಿತ್ತು ಎಂದು ವಿವರಗಳನ್ನು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಮರು ಎಣಿಕೆ ಸಂದರ್ಭದಲ್ಲಿ ಚುನಾವಣಾ ವೀಕ್ಷಕರು ಸಹ ಬಂದಿದ್ದರು. ಗಂಭೀರ ಸ್ವರೂಪದ ಕ್ರಿಮಿನಲ್ ಸಂಚು ನಡೆದಿರುವುದಾಗಿ ಅವರು ಚುನಾವಣಾ ಆಯೋಗಕ್ಕೆ ಪತ್ರ ಬರೆದಿರುವುದಾಗಿ ತಿಳಿದು ಬಂದಿದೆ.

ಅಂಚೆ ಮತಪತ್ರಗಳನ್ನು ಫೊರೆನ್ಸಿಕ್ ಪರಿಶೀಲನೆಗೆ ಸಲ್ಲಿಸಬೇಕಿತ್ತು. ಆದರೆ ಚುನಾವಣಾಧಿಕಾರಿಗಳು ಚುನಾವಣಾ ವೀಕ್ಷಕರ ಅನುಮತಿಯಿಲ್ಲದೇ ಆತುರಾತುರವಾಗಿ ಫಲಿತಾಂಶ ಘೋಷಿಸಿದ್ದಾರೆ. ತಪ್ಪು ಮಾಡಿದ ಯಾರೇ ಆಗಿದ್ದರೂ, ಅಂತಹ ಅಧಿಕಾರಿಗೆ ಶಿಕ್ಷೆಯಾಗಬೇಕು ಎಂದು ಒತ್ತಾಯಿಸಿದರು.

ಬಾಗಲಕೋಟೆ ಹಾಗೂ ದಾವಣಗೆರೆ ಕ್ಷೇತ್ರಗಳಿಗೆ ನಡೆದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಇಬ್ಬರು ಅಭ್ಯರ್ಥಿಗಳು ಗೆದ್ದಿದ್ದಾರೆ. ಇದು ನಿರೀಕ್ಷಿತ. ಪಂಚ ಗ್ಯಾರಂಟಿಗಳು ನಮ್ಮ ಕೈ ಹಿಡಿದಿವೆ ಎಂದ ಸಿಎಂ, ಇದು ಮುಂದಿನ2028ರ ಚುನಾವಣೆಗೆ ದಿಕ್ಸೂಚಿ ಎಂದು ಬಿಜೆಪಿಯವರು ಚುನಾವಣಾ ಪ್ರಚಾರದ ಸಂದರ್ಭದಲ್ಲಿ ಹೇಳುತ್ತಿದ್ದರು. ಅವರ ಪ್ರಕಾರ 2028ರಲ್ಲೂ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರಲಿದೆ ಎಂದಾಯಿತು ಎಂದರು.

ಈ ಹಿಂದೆ ನಡೆದ ಮೂರು ಉಪ ಚುನಾವಣೆಯಲ್ಲೂ ಕಾಂಗ್ರೆಸ್ ಜಯ ಗಳಿಸಿದೆ. ಇದರರ್ಥ ನಮ್ಮ ಕಾರ್ಯಕ್ರಮಗಳನ್ನು ಜನರು ಮೆಚ್ಚಿಕೊಂಡಿದ್ದಾರೆ. ನಮ್ಮ ಕಾರ್ಯಕ್ರಮಗಳು ಮತದಾರರನ್ನು ತಲುಪಿವೆ. ಜನರು ನಮ್ಮ ಮೇಲೆ ವಿಶ್ವಾಸ, ಅಭಿಮಾನ ಇರಿಸಿಕೊಂಡಿದ್ದಾರೆ.

ಕಾಂಗ್ರೆಸ್ ಪಕ್ಷನ ನುಡಿದಂತೆ ನಡೆಯುವ ಪಕ್ಷ. ಕೊಟ್ಟ ಮಾತಿನಂತೆ ನಡೆಯುವ ಪಕ್ಷ. ಗ್ಯಾರಂಟಿ ಯೋಜನೆಗಳು ನಮ್ಮ ಕೈ ಹಿಡಿದಿದ್ದಾವೆ. ಎಸ್ಡಿಪಿಐಗೆ ಮತ ಬಿದ್ದಿದೆ. ನಾವು ಎಲ್ಲಿ ಎಡವಿದ್ದೇವೆ ಎಂಬುವುದನ್ನು ಪರಿಶೀಲನೆ ಮಾಡಲಿದ್ದೇವೆ ಎಂದರು.

# ನಾಳೆ ವಿಜಯ್‌ಗೆ ಪಟ್ಟಾಭಿಷೇಕ..?

ಚೆನ್ನೈ: ನಟ-ರಾಜಕಾರಣಿ ವಿಜಯ್ ತಮಿಳುನಾಡು ಚುನಾವಣೆಯಲ್ಲಿ ಅತಿ ಹೆಚ್ಚು ಸ್ಥಾನಗಳನ್ನು ಗೆಲ್ಲುವ ಮೂಲಕ ಎಲ್ಲರನ್ನೂ ಅಚ್ಚರಿಗೊಳಿಸಿದರು. ಈ ಚುನಾವಣೆಯಲ್ಲಿ ತಮಿಳುನಾಡು ವೆಟ್ರಿ ಕಳಗಂ (ಟಿವಿಕೆ) 108 ಸ್ಥಾನಗಳನ್ನು ಗೆದ್ದಿದೆ.



ಟಿವಿಕೆ ಮುಖ್ಯಸ್ಥ ವಿಜಯ್ ತಮ್ಮ ಹೊಸದಾಗಿ ಆಯ್ಕೆಯಾದ ಶಾಸಕರೊಂದಿಗೆ ಸಭೆ ನಡೆಸಿದ್ದು ವಿಜಯ್ ಅವರನ್ನು ಶಾಸಕಾಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡಲಾಯಿತು.

ಪ್ರಮಾಣವಚನ ಸಮಾರಂಭವು ಮೇ 7ರಂದು ನಡೆಯಲಿದೆ ಎಂದು ವರದಿಯಾಗಿದೆ. ಚೆನ್ನೈನಲ್ಲಿ ಒಂದು ದೊಡ್ಡ ಸಮಾರಂಭ ನಡೆಯಲಿದೆ ಎಂದು ನಿರೀಕ್ಷಿಸಲಾಗಿದೆ. ಹಿರಿಯ ರಾಜಕೀಯ ನಾಯಕರು, ಸೆಲೆಬ್ರಿಟಿಗಳು ಮತ್ತು ಹೆಚ್ಚಿನ ಸಂಖ್ಯೆಯ ಬೆಂಬಲಿಗರು ಭಾಗವಹಿಸುವ ಸಾಧ್ಯತೆಯಿದೆ. ವಿಜಯ್ ಅವರ ಬೃಹತ್ ಸಾರ್ವಜನಿಕ ಅನುಯಾಯಿಗಳನ್ನು ಗಮನದಲ್ಲಿಟ್ಟುಕೊಂಡು ಅಧಿಕಾರಿಗಳು ಬಿಗಿ ಭದ್ರತಾ ವ್ಯವಸ್ಥೆಗಳಿಗೆ ಸಿದ್ಧತೆ ನಡೆಸುತ್ತಿದ್ದಾರೆ.

ಟಿವಿಕೆ ಮುಖ್ಯಸ್ಥರು ಪಕ್ಷದ ಪ್ರಧಾನ ಕಚೇರಿಯಲ್ಲಿ ಪೆರಿಯಾರ್ ಇ.ವಿ. ರಾಮಸಾಮಿ, ಬಿ.ಆರ್. ಅಂಬೇಡ್ಕರ್, ಕೆ. ಕಾಮರಾಜ್, ವೇಲು ನಾಚಿಯಾರ್ ಮತ್ತು ಅಂಜಲೈ ಅಮ್ಮಲ್ ಅವರಿಗೆ ಪುಷ್ಪ ನಮನ ಸಲ್ಲಿಸಿದರು. ವಿಜಯ್ ಅವರನ್ನು ಅವರ ಪಕ್ಷದ ಸದಸ್ಯರು ಮತ್ತು ಹಲವಾರು ಶಾಸಕರು ಸ್ವಾಗತಿಸಿದರು. ಶಾಸಕಾಂಗ ಪಕ್ಷದ ನಾಯಕನ ಆಯ್ಕೆ ಮತ್ತು ವಿಧಾನಸಭೆಯಲ್ಲಿ ಶಾಸಕರ ನಡವಳಿಕೆಯ ಬಗ್ಗೆ ಚರ್ಚಿಸಲು ವಿಜಯ್ ಪಕ್ಷದ ಶಾಸಕರ ಸಭೆ ಕರೆದಿದ್ದರು.

ಸಭೆಯಲ್ಲಿ, ಶಾಸಕರು ತಮ್ಮ ಪ್ರಮಾಣಪತ್ರಗಳನ್ನು ಪಕ್ಷದ ನಾಯಕರಿಗೆ ಸಲ್ಲಿಸಿ ಸರ್ಕಾರ ರಚನೆಯ ತಂತ್ರಗಳ ಬಗ್ಗೆ ಚರ್ಚಿಸಿದರು. ಟಿವಿಕೆ ಸರ್ಕಾರ ರಚಿಸಲು 118 ಶಾಸಕರು ಅಗತ್ಯವಿದೆ.

ವಿಜಯ್ ಅವರ ಪಕ್ಷವು 108 ಶಾಸಕರನ್ನು ಹೊಂದಿರುವುದರಿಂದ, ಉಳಿದ 10 ಸ್ಥಾನಗಳಿಗೆ ಅವರಿಗೆ ಮತ್ತೊಂದು ಪಕ್ಷದ ಬೆಂಬಲ ಬೇಕಾಗುತ್ತದೆ.

ತಮಿಳುನಾಡಿನಲ್ಲಿ 234 ವಿಧಾನಸಭಾ ಸ್ಥಾನಗಳಿಗೆ ಏಪ್ರಿಲ್ 23 ರಂದು ಚುನಾವಣೆ ನಡೆದಿದ್ದು, ಸೋಮವಾರ, ಮೇ 4 ರಂದು ಎಣಿಕೆ ನಡೆಯಿತು. ಈ ಚುನಾವಣೆಯಲ್ಲಿ ಟಿವಿಕೆ ಅದ್ಭುತ ಪ್ರದರ್ಶನ ನೀಡಿ 108 ಸ್ಥಾನಗಳನ್ನು ಗೆದ್ದು ಅತಿದೊಡ್ಡ ಪಕ್ಷವಾಯಿತು. ಆದರೆ ಡಿಎಂಕೆ 59 ಮತ್ತು ಎಐಎಡಿಎಂಕೆ 47 ಸ್ಥಾನಗಳನ್ನು ಗಳಿಸಿತು.

ಟಿವಿಕೆ ಕಾಂಗ್ರೆಸ್ ಮತ್ತು ಇತರ ಕೆಲವು ಪಕ್ಷಗಳೊಂದಿಗೆ ಮೈತ್ರಿ ಮಾಡಿಕೊಂಡು ಸರ್ಕಾರ ರಚಿಸಬಹುದು ಎಂದು ಮಾಧ್ಯಮಗಳು ವರದಿ ಮಾಡಿದೆ.

ಕಾಂಗ್ರೆಸ್ ಐದು ಸ್ಥಾನಗಳನ್ನು, ವಿಸಿಕೆ ಎರಡು, ಮತ್ತು ಸಿಪಿಐ ಮತ್ತು ಸಿಪಿಐ(ಎಂ) ತಲಾ ಎರಡು ಸ್ಥಾನಗಳನ್ನು ಹೊಂದಿವೆ. ಅವರು ಒಟ್ಟಿಗೆ ಬಂದರೆ, ಅವರು 11 ಶಾಸಕರ ಬಲವಾದ ಒಕ್ಕೂಟವನ್ನು ರಚಿಸುತ್ತಾರೆ. ಐಯುಎಂಎಲ್, ಡಿಎಂಡಿಕೆ ಅಥವಾ ಪಿಎಂಕೆಯ ಕೆಲವು ಭಾಗಗಳಿಂದ ಟಿವಿಕೆಗೆ ಹೆಚ್ಚುವರಿ ಬೆಂಬಲ ಸಿಗಬಹುದು ಎಂದು ನಿರೀಕ್ಷಿಸಲಾಗಿದೆ.

ಮೈತ್ರಿ ಮಾಡಿಕೊಂಡರೆ ಕಾಂಗ್ರೆಸ್ ಎರಡು ಸಚಿವಾಲಯಗಳನ್ನು ಪಡೆಯುವ ಸಾಧ್ಯತೆಯಿದೆ. ಆದರೆ ಇತರ ಸಣ್ಣ ಪಕ್ಷಗಳು ತಲಾ ಒಂದು ಖಾತೆಯನ್ನು ಪಡೆಯುತ್ತವೆ ಎಂದು ಮೂಲಗಳು ತಿಳಿಸಿವೆ. ಟಿವಿಕೆ ತನ್ನ ಮಿತ್ರಪಕ್ಷಗಳಿಗೆ ನಾಲ್ಕರಿಂದ ಆರು ಸಚಿವ ಸ್ಥಾನಗಳನ್ನು ನೀಡಬಹುದು.

# ನಾನು ಸೋತಿಲ್ಲ: ದೀದಿ ಹೊಸರಾಗ

ನನಗೆ ಕುರ್ಚಿಯಲ್ಲ, ಜನರು ಮುಖ್ಯ: ಭವಾನಿಪುರದಲ್ಲಿ ಸೋತಿದ್ದು ವಿಧಾನಸಭೆ ಪ್ರವೇಶಿಸಲು ಉಪ ಚುನಾವಣೆಯಲ್ಲಿ ಸ್ಪರ್ಧೆ ಮಾಡುತ್ತೀರಾ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅವರು, ನಾನು ವಿಧಾನಸಭೆಗೆ ಹೋಗುವುದಿಲ್ಲ. ನನ್ನನ್ನು ಬಲವಂತವಾಗಿ ಸೋಲಿಸಲಾಗಿದೆ. ನನಗೆ ಕುರ್ಚಿಯ ಬಗ್ಗೆ ಕಾಳಜಿ ಇಲ್ಲ. ಜನರ ಬಗ್ಗೆ ಕಾಳಜಿ ಇದೆ. ನಾನು ಈಗ ಸ್ವತಂತ್ರಳಾಗಿದ್ದೇನೆ. ಬೀದಿಯಲ್ಲಿದ್ದೇನೆ, ಇಲ್ಲಿಯೇ ಇರುತ್ತೇನೆ ಎಂದು ಹೇಳಿದರು.



ಕೋಲ್ಕತ್ತಾ (ಪಶ್ಚಿಮಬಂಗಾಳ): ವಿಧಾನಸಭೆ ಚುನಾವಣೆಯಲ್ಲಿ ಹೀನಾಯ ಸೋಲು ಕಂಡರೂ ಟಿಎಂಸಿ ನಾಯಕಿ ಮಮತಾ ಬ್ಯಾನರ್ಜಿ ಅವರು ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡುವುದಿಲ್ಲ ಎಂದು ಹೇಳಿದ್ದಾರೆ.

ಕೋಲ್ಕತ್ತಾದಲ್ಲಿ ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಅವರು, ನಮ್ಮ ಪಕ್ಷವನ್ನು (ಟಿಎಂಸಿ) ಬಲವಂತವಾಗಿ ಸೋಲಿಸಲಾಗಿದೆ. ಇದು ಬಿಜೆಪಿಯ ನಿಜವಾದ ಗೆಲುವಲ್ಲ. ಅಕ್ರಮ, ಅನೈತಿಕವಾಗಿ ಚುನಾವಣೆ ನಡೆಸಲಾಗಿದೆ. ನಾನು ಭವಾನಿಪುರದಲ್ಲಿ ಗೆದ್ದಿದ್ದರೂ ಸೋಲಿಸಲಾಗಿದೆ ಎಂದು ಆರೋಪಿಸಿದ್ದಾರೆ.

ಬಿಜೆಪಿ ಪ್ರಜಾಪ್ರಭುತ್ವದ ಮಾದರಿಯಲ್ಲಿ ನಿಜವಾಗಿಯೂ ಗೆದ್ದಿದ್ದರೆ, ಯಾವುದೇ ತಕರಾರು ಇರಲಿಲ್ಲ. ಸೋಲು- ಗೆಲುವು ಚುನಾವಣೆಗಳ ಭಾಗ. ನಿಯಮಾನುಸಾರ ಗೆಲ್ಲದ ಕಾರಣ, ನಾನು ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡುವುದಿಲ್ಲ. ನಮ್ಮ ಪಕ್ಷವು ಒಗ್ಗಟ್ಟಾಗಿದೆ. ಎಲ್ಲರೂ ಒಟ್ಟಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಅವರು ಹೇಳಿದರು.

ನನಗೆ ಕುರ್ಚಿಯಲ್ಲ, ಜನರು ಮುಖ್ಯ: ಭವಾನಿಪುರದಲ್ಲಿ ಸೋತಿದ್ದು ವಿಧಾನಸಭೆ ಪ್ರವೇಶಿಸಲು ಉಪ ಚುನಾವಣೆಯಲ್ಲಿ ಸ್ಪರ್ಧೆ ಮಾಡುತ್ತೀರಾ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅವರು, ನಾನು ವಿಧಾನಸಭೆಗೆ ಹೋಗುವುದಿಲ್ಲ. ನನ್ನನ್ನು ಬಲವಂತವಾಗಿ ಸೋಲಿಸಲಾಗಿದೆ. ನನಗೆ ಕುರ್ಚಿಯ ಬಗ್ಗೆ ಕಾಳಜಿ ಇಲ್ಲ. ಜನರ ಬಗ್ಗೆ ಕಾಳಜಿ ಇದೆ. ನಾನು ಈಗ ಸ್ವತಂತ್ರಳಾಗಿದ್ದೇನೆ. ಬೀದಿಯಲ್ಲಿದ್ದೇನೆ, ಇಲ್ಲಿಯೇ ಇರುತ್ತೇನೆ ಎಂದು ಹೇಳಿದರು.

ಪಕ್ಷದ ಕಚೇರಿಗಳ ಮೇಲೆ ದಾಳಿ ಖಂಡನೀಯ: ಇನ್ನು, ತಮ್ಮ ಪಕ್ಷದ ಕಚೇರಿಗಳ ಮೇಲೆ ಅಲ್ಲಲ್ಲಿ ನಡೆಯುತ್ತಿರುವ ದಾಳಿಯನ್ನು ಖಂಡಿಸಿದರು. ಬಿಜೆಪಿ ಕಾರ್ಯಕರ್ತರು ನಮ್ಮ ಕಚೇರಿಗಳನ್ನು ಗುರಿಯಾಗಿಸಿಕೊಂಡು ದಾಳಿ ಮಾಡುತ್ತಿದ್ದಾರೆ.

ಕಚೇರಿಗಳನ್ನು ತಮ್ಮ ವಶಕ್ಕೆ ಪಡೆದುಕೊಂಡಿದ್ದಾರೆ. ನಿನ್ನೆ (ಸೋಮವಾರ) ರಾತ್ರಿ ಪಕ್ಷದ ಮುಖ್ಯ ಕಚೇರಿಯನ್ನು ಆಕ್ರಮಿಸಲು ಪ್ರಯತ್ನ ನಡೆದಿದೆ. ಅಭಿಷೇಕ್ ಬ್ಯಾನರ್ಜಿ ಅವರ ಕಚೇರಿಯ ಮೇಲೂ ದಾಳಿ ನಡೆಸಲಾಗಿದೆ ಎಂದು ಆರೋಪಿಸಿದರು.

ಟಿಎಂಸಿ ಕಾರ್ಯಕರ್ತರನ್ನು ಬಿಜೆಪಿಗೆ ಸೇರಲು ಆಮಿಷವೊಡ್ಡಲಾಗುತ್ತಿದೆ. ಅವರು ತಮ್ಮ ಸುರಕ್ಷತೆಗಾಗಿ ಹಾಗೆ ಮಾಡಬಹುದು. ಇಂದು ಅವರು ಪಕ್ಷದಿಂದ ಹೋಗಬಹುದು. ಆದರೆ ಭವಿಷ್ಯದಲ್ಲಿ ಅವರು ತಮ್ಮ ಮನಸ್ಸನ್ನು ಬದಲಾಯಿಸಿಕೊಳ್ಳಲಿದ್ದಾರೆ ಎಂದು ಮಮತಾ ಹೇಳಿದರು.

ನೂತನ ಸರ್ಕಾರ ರಚನೆಗೆ ಬಿಜೆಪಿ ಸಜ್ಜು: ಐತಿಹಾಸಿಕ ಜಯ ಸಾಧಿಸಿರುವ ಬಿಜೆಪಿ ರಾಜ್ಯದಲ್ಲಿ ನೂತನ ಸರ್ಕಾರ ರಚನೆಗೆ ದಿನಾಂಕ ನಿಗದಿ ಮಾಡಿ ಘೋಷಿಸಿದೆ. ಮೇ 9 ರಂದು ರವೀಂದ್ರನಾಥ್ ಟ್ಯಾಗೋರ್ ಅವರ ಜನ್ಮವಾಗಿದ್ದು ಅಂದೇ ಸರ್ಕಾರ ರಚನೆಯಾಗಲಿದೆ ಎಂದು ಬಂಗಾಳ ಬಿಜೆಪಿ ರಾಜ್ಯಾಧ್ಯಕ್ಷ ಸಮಿಕ್ ಭಟ್ಟಾಚಾರ್ಯ ಅವರು ಇಂದು ಮಾಧ್ಯಮಗಳಿಗೆ ತಿಳಿಸಿದ್ದಾರೆ.

# '2028ಕ್ಕೆ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ'



ದಾವಣಗೆರೆ: ಬಿಜೆಪಿಯ ಗತವೈಭವದ ದಿನಗಳು ದಾವಣಗೆರೆಯಲ್ಲಿ ಮರುಕಳಿಸಲಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಸೋಲಿನ ಪರಾಮರ್ಶೆ ಹಾಗೂ ಆತ್ಮಸ್ಥೈರ್ಯ ತುಂಬುವ ನಿಟ್ಟಿನಲ್ಲಿ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಮನೆಗೆ ಭೇಟಿ ನೀಡಿದ ವಿಜಯೇಂದ್ರ ಅವರು, ಜಿಲ್ಲಾ ಬಿಜೆಪಿ ನಾಯಕರ ಜೊತೆ ದಾವಣಗೆರೆಯಲ್ಲಿ ಪಕ್ಷ ಸಂಘಟನೆ ಚರ್ಚೆ ನಡೆಸಿದರು.

63000 ಮತ ನೀಡಿದ ಮತದಾರರಿಗೆ ಹಾಗೂ ಕಾರ್ಯಕರ್ತರಿಗೆ ಅಭಿನಂದನೆ ಸಲ್ಲಿಸಿದರು. ವಿಜಯೇಂದ್ರರನ್ನು ಬಿಜೆಪಿ ಕಾರ್ಯಕರ್ತರು ಆತ್ಮೀಯವಾಗಿ ಸ್ವಾಗತಿಸಿದರು. ವಿಜಯೇಂದ್ರರ ಜೊತೆ ಮಾಜಿ ಸಚಿವ ಎಂಪಿ ರೇಣುಕಾಚಾರ್ಯ ಸೇರಿದಂತೆ ಹಲವು ನಾಯಕರು ಆಗಮಿಸಿದ್ದರು.

ಸಾಮಾನ್ಯ ಕಾರ್ಯಕರ್ತ ಇಷ್ಟೊಂದು ಮತ ಪಡೆದಿರುವುದು ಸುಲಭ ಅಲ್ಲ. ಆಗುವುದೆಲ್ಲ ಒಳ್ಳೆಯದಕ್ಕೆ ಎಂದು ಆತ್ಮವಿಶ್ವಾಸ ತುಂಬಿದರು. ವಿಜಯೇಂದ್ರರು ಸಮಾಧಾನ ಪಡಿಸುವ ವೇಳೆ ಶ್ರೀನಿವಾಸ್ ದಾಸಕರಿಯಪ್ಪ ಭಾವುಕರಾದರು. ಅವರನ್ನು ರಾಜ್ಯಾಧ್ಯಕ್ಷರು ಸಮಾಧಾನಪಡಿಸಿದರು.

ಶ್ರೀನಿವಾಸ್ ಅವರ ಮನೆಯಲ್ಲಿ ವಿಜಯೇಂದ್ರರು ದೋಸೆ ಸವಿದರು. ಉಪಚುನಾವಣೆಯ ಫಲಿತಾಂಶ ನಮ್ಮ ಕಣ್ಣ ಮುಂದೆ ಇದೆ. ಸಾಕಷ್ಟು ನಿರೀಕ್ಷೆಗಳನ್ನು ನಾವು ಇಟ್ಟುಕೊಂಡಿದ್ದೆವು. ಉಪಚುನಾವಣೆ ಎಂದರೆ ಆಡಳಿತ ಪಕ್ಷದ ಪರವಾಗಿ ಇರುತ್ತದೆ. ಸಿಎಂ ಹಾಗೂ ಸಚಿವರು ಬಾಗಲಕೋಟೆ ಯಲ್ಲಿ 15 ದಿನ ಅಲ್ಲೇ ಇದ್ದರು. ನಮ್ಮ ಪಕ್ಷ ಅಧಿಕಾರದಲ್ಲಿ ಇದ್ದಾಗಲೂ ಅದೇ ಆಗಿದೆ ಎಂದು ನುಡಿದರು. ಎರಡು ಕ್ಷೇತ್ರದ ಕಾರ್ಯಕರ್ತರು ಬಿಜೆಪಿ ಗೆಲ್ಲಿಸಲು ಶ್ರಮ ವಹಿಸಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು.

ದಾವಣಗೆರೆ ದಕ್ಷಿಣದ ನಮ್ಮ ಅಭ್ಯರ್ಥಿ ಉತ್ತಮವಾದ ಮತಗಳನ್ನು ಪಡೆದಿದ್ದಾರೆ. ನಾವು 70 ಸಾವಿರಕ್ಕೂ ಹೆಚ್ಚು ಮತಗಳು ಬೀಳುತ್ತವೆ ಎನ್ನುವ ನಿರೀಕ್ಷೆ ಇಟ್ಟುಕೊಂಡಿದ್ದೆವು. ನಮಗೆ ಈ ಬಾರಿ ಅದೃಷ್ಟ ಕೈ ಹಿಡಿಯಲಿಲ್ಲ. ಆದರೆ ಕಾಂಗ್ರೆಸ್ ಹಣದ ಹೊಳೆ ಹರಿಸಿದ ಬಗ್ಗೆ ನಾನೇನು ಮಾತಾಡೋದಿಲ್ಲ. ಅಭ್ಯರ್ಥಿ ಜೊತೆ ಅಕಾಂಕ್ಷಿಗಳು ಕೂಡ ಉತ್ತಮ ಕೆಲಸ ಮಾಡಿದ್ದಾರೆ ಎಂದು ನುಡಿದರು.

ಯಡಿಯೂರಪ್ಪ ನವರು ಇಂತಹ ಸಾಕಷ್ಟು ಸಮಸ್ಯೆಗಳನ್ನು ದಿಟ್ಟತನದಿಂದ ಎದುರಿಸಿದ್ದಾರೆ. ಅಂತವರ ಮಗನಾಗಿ ಅದೇ ದಿಟ್ಟತನವನ್ನು ಪ್ರದರ್ಶನ ಮಾಡುತ್ತೇನೆ. ಮತ್ತೆ ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತರಲು ಶ್ರಮ ವಹಿಸುತ್ತೇವೆ.

ಉಪಚುನಾವಣೆಯಲ್ಲಿ ನಮ್ಮ ನಾಯಕರು ಕೂಡ ಉತ್ತಮ ಶ್ರಮವಹಿಸಿದ್ದಾರೆ. ಈ ಗೃಹಲಕ್ಷ್ಮಿ ಚುನಾವಣಾ ಲಕ್ಷ್ಮೀಯಾಗಿದ್ದಾಳೆ. ನಾಲ್ಕೈದು ತಿಂಗಳ ಕಂತು ಉಪಚುನಾವಣೆ ಸಂದರ್ಭದಲ್ಲಿ ಬಿಡುಗಡೆ ಮಾಡುತ್ತಾರೆ. ಈಗ ಮುಂದೆ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಚುನಾವಣಾ ಸಂದರ್ಭದಲ್ಲಿ ಬಿಡುಗಡೆ ಮಾಡುತ್ತಾರೆ. ಕಾಂಗ್ರೆಸ್ ನವರು ಅಧಿಕಾರದಲ್ಲಿ ಇದ್ದಾರೆ. ನಾವೇನು ಮಾಡೋಕೆ ಅಗೋಲ್ಲ ಎಂದು ತಿಳಿಸಿದರು.

# ಸಿಎಂ ಗೊಂದಲ: ಬಗೆಹರಿಸಲು ಆಗ್ರಹ

ಬೆಂಗಳೂರು: ಸಿಎಂ, ಡಿಸಿಎಂ ಅವರನ್ನು ದೆಹಲಿಗೆ ಕರೆಯಲೇಬೇಕು. ಗೊಂದಲಕ್ಕೆ ಬ್ರೇಕ್ ಹಾಕಲೇಬೇಕು ಎಂದು ಸಚಿವ ಸತೀಶ್ ಜಾರಕಿಹೊಳಿ ಒತ್ತಾಯಿಸಿದ್ದಾರೆ.

ಬೆಂಗಳೂರಲ್ಲಿಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮಲ್ಲಿಕಾರ್ಜುನ್ ಖರ್ಗೆಯವರು ಮೊನ್ನೆ ಅದನ್ನೇ ಹೇಳಿದ್ದಾರೆ. ಎಷ್ಟು ದಿವಸ ಅಂತ ಹೀಗೆ ಬಿಡ್ತೀರ. ಬೇಗ ಆಗಬೇಕು ಅಂತ ಮಾಡಬೇಕಲ್ಲ. ಹೈಕಮಾಂಡ್ ನಾಯಕರು ಕರೆಯಬಹುದು. ಎಲ್ಲರ ಅಭಿಪ್ರಾಯವೂ ಅದೇ ಇದೆ. ಏನಾದ್ರೂ ತೀರ್ಮಾನ ಮಾಡಲಿ ಅನ್ನೋದು. ಮೊದಲು ಗೊಂದಲಗಳನ್ನು ಸರಿಪಡಿಸಬೇಕು ಎಂದರು.

ನಾವು ಅಹಿಂದ ವೋಟು ವಾಪಸ್ ತಂದಿದ್ದೇವೆ. ನಮ್ಮ ಟೀಂ ಕೂಡ ಸಾಕಷ್ಟು ವರ್ಕ್ ಮಾಡಿದೆ. ಶಿಗ್ಗಾಂವಿಯಲ್ಲೂ ನಾವು ಅದೇ ತಂತ್ರ ಮಾಡಿದ್ದೆವು. ಅಲ್ಲಿಯೂ ಅಹಿಂದ ಮತಗಳೇ ಕೈಹಿಡಿದಿದ್ದು. ಕಾಂಗ್ರೆಸ್ ಗೆಲ್ಲೋಕೆ ಅವೇ ಮುಖ್ಯ. ಅವನ್ನು ನಾವು ಕಾಪಾಡಿಕೊಂಡು ಹೋಗಬೇಕು. 2028ರಲ್ಲಿ ಅಹಿಂದ ಒಗ್ಗೂಡಿಸುವ ಸವಾಲಿದೆ. ಎರಡು ವರ್ಷ ನಮಗೆ ಇದೆ. ಅಲ್ಲಿಯವರೆಗೆ ನಾವು ಒಟ್ಟುಗೂಡಿಸ್ತೇವೆ. ಜಿ.ಪಂ, ತಾ.ಪಂ ಚುನಾವಣೆಗಳು ಬರುತ್ತವೆ. ಅಲ್ಲಿ ಬೇರೆ ರೀತಿ ಮಾಡಬೇಕು. ನಾವೂ ಅಹಿಂದ ತಾನೇ. ಲೋಕಲ್‌ನಲ್ಲಿ ಇದು ವರ್ಕೌಟ್ ಆಗಲ್ಲ ಎಂದರು.

ದಾವಣಗೆರೆಯಲ್ಲಿ ಅಲ್ಪಸಂಖ್ಯಾತ ವೋಟು ಮೈನಸ್ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಕೈವಾಡದಿಂದ ಆಗಿದ್ಯೋ, ಲೋಕಲ್ ಕ್ಯಾಂಡಿಡೇಟ್ ಇರಲಿಲ್ವೋ?. ಅದರ ಬಗ್ಗೆ ಹೇಳೋಕೆ ಆಗಲ್ಲ. ಲೋಕಲ್, ಒಳ ಹೊರಗು ಅಂತ ಪ್ರಶ್ನೆ ಬರಲ್ಲ. ಅಲ್ಲಿ ಸರಿಪಡಿಸುವ ಕೆಲಸ ಆಗಬೇಕು. ಚುನಾವಣೆಗೆ ಎರಡು ವರ್ಷ ಇದೆ, ಅಷ್ಟರಲ್ಲಿ ಸರಿಪಡಿಸಬೇಕು. ದಾವಣಗೆರೆ ಸೀಮಿತವಾಗಿ ನೋಡ್ತೋದು ಬೇಡ. ಇಡೀ ರಾಜ್ಯವನ್ನು ನೋಡಬೇಕಿದೆ. ಇನ್ನೂ ಸಮಯವಿದೆ. ಸಿಎಂ, ಡಿಸಿಎಂ ಎಲ್ಲರನ್ನೂ ಕರೆಸಿ ಮಾತನಾಡ್ತಾರೆ ಎಂದರು.

ನಸೀರ್ ಅಹ್ಮದ್, ಜಬ್ಬಾರ್ ಅಮಾನತು ವಿಚಾರವಾಗಿ ಪ್ರತಿಕ್ರಿಯಿಸಿ ಸಿಎಂ, ಡಿಸಿಎಂ ನೋಡ್ತಾರೆ. ನಮ್ಮ ಗೊಂದಲದಿಂದ ವೋಟು ಹೋಗಿದೆ ಅಷ್ಟೇ. ಯಾಕೆ ನಮ್ಮ ವೋಟು ಹೋಯ್ತು?.

ಅದನ್ನು ಸರಿಪಡಿಸುವ ಕೆಲಸ ಮಾಡಬೇಕು. ಹಿಂದೆಯೂ ಸಾಕಷ್ಟು ಜನ ವಿರೋಧ ಮಾಡಿದ್ದರು. ಒಮ್ಮೆ ತಪ್ಪು ಮಾಡ್ತಾರೆ ಸರಿಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

## ಸರ್ಕಾರ ರಚನೆಗೆ ಸಿದ್ಧತೆ

ಚೆನ್ನೈ: ದಳಪತಿ ವಿಜಯ್ ನೇತೃತ್ವದ ತಮಿಳಗ ವೆಟ್ರಿ ಕಳಗಂ ಪಕ್ಷ ಬಹುಮತದ ಕೊರತೆಯಿದ್ದರೂ, ಸರ್ಕಾರ ರಚನೆಗೆ ಹಕ್ಕು ಮಂಡಿಸಿದೆ ಎಂದು ವರದಿಗಳು ತಿಳಿಸಿವೆ.

ತಮಿಳುನಾಡಿನ ರಾಜಕೀಯದಲ್ಲಿ ದಳಪತಿ ವಿಜಯ್ ದರ್ಬಾರ್ ಆರಂಭವಾಗಿದೆ. ಚೊಚ್ಚಲ ಪ್ರಯತ್ನದಲ್ಲೇ ನಟ ವಿಜಯ್ ಸ್ಪರ್ಧೆ ಮಾಡಿದ್ದ ಎರಡೂ ಕ್ಷೇತ್ರಗಳಲ್ಲಿ ಭರ್ಜರಿ ಗೆಲುವು ಸಾಧಿಸಿರುವುದು ಅಷ್ಟೇ ಗಮನಾರ್ಹ ಸಂಗತಿ. ಚೊಚ್ಚಲ ಚುನಾವಣೆಯಲ್ಲೇ 108 ಸ್ಥಾನಗಳಲ್ಲಿ ಗೆಲುವು ಸಾಧಿಸಿರುವ ಟಿವಿಕೆ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಆದ್ರೆ ಬಹುಮತಕ್ಕೆ 118 ಸ್ಥಾನಗಳು ಬೇಕಿದ್ದು, 10 ಸ್ಥಾನಗಳ ಕೊರತೆಯಿದೆ. ಹೀಗಿದ್ದರೂ ಟಿವಿಕೆ ಸರ್ಕಾರ ರಚನೆಗೆ ಹಕ್ಕು ಮಂಡಿಸಿದೆ ಎನ್ನಲಾಗ್ತಿದೆ. ಹೀಗಾಗಿ ಮೈತ್ರಿ ಕುರಿತ ಚರ್ಚೆಗಳು ಜೋರಾಗಿ ನಡೆಯುತ್ತಿದೆ.

ಟಿವಿಕೆ ಮುಖ್ಯಸ್ಥ ವಿಜಯ್, ರಾಜ್ಯಪಾಲ ರಾಜೇಂದ್ರ ಅರ್ಲೇಕರ್ ಅವರಿಗೆ ಪತ್ರ ಬರೆದು ಸರ್ಕಾರ ರಚಿಸಲು ಹಕ್ಕು ಮಂಡಿಸಿದ್ದಾರೆ. ಪ್ರಮಾಣವಚನ ಸ್ವೀಕರಿಸಲು ರಾಜ್ಯಪಾಲರನ್ನು ಆಹ್ವಾನಿಸುವಂತೆ ರಾಜಭವನಕ್ಕೆ ಮನವಿ ಮಾಡಿದ್ದಾರೆ.

# ರಾಜ್ಯದೆಲ್ಲೆಡೆ ಅಬ್ಬರಿಸಲಿರುವ ವರುಣ: ಮೂರು ದಿನ ಭಾರೀ ಮಳೆ ಎಚ್ಚರಿಕೆ

ಬೆಂಗಳೂರು: ರಾಜ್ಯದ ಕೆಲವು ದಿನಗಳಲ್ಲಿ ಹಲವೆಡೆ ಮಳೆಯಾಗುತ್ತಿದ್ದು, ರಣ ಬಿಸಿಲಿನಿಂದ ತತ್ತರಿಸಿದ ಜನತೆಗೆ ಕೊಂಚ ತಂಪೆರೆದಿದೆ.

ಸಿಲಿಕಾನ್ ಸಿಟಿ ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಮುಂದಿನ ಮೂರು ದಿನ ಗುಡುಗು ಸಹಿತ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಮುನ್ನೆಚ್ಚರಿಕೆ ಕ್ರಮವಾಗಿ ರಾಜ್ಯದ ಒಟ್ಟು 13 ಜಿಲ್ಲೆಗಳಿಗೆ ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಿಸಿದೆ.

ರಾಜಧಾನಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಸೇರಿದಂತೆ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಮುಂದಿನ ಮೂರು ದಿನ ಮಳೆ ಅಬ್ಬರಿಸಲಿದೆ. ಮೈಸೂರು, ಮಂಡ್ಯ, ಹಾಸನ, ಕೊಡಗು ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ನೀಡಿದೆ.

ಈ ವೇಳೆ ಗಂಟೆಗೆ ಸುಮಾರು 30 ರಿಂದ 40 ಕಿ. ಮೀ ವೇಗದಲ್ಲಿ ಬಲವಾದ ಗಾಳಿ ಬೀಸಲಿದ್ದು, ಜನ ಎಚ್ಚರಿಕೆಯಿಂದ ಇರುವಂತೆ ಸೂಚಿಸಲಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯ ಕೆಲವು ಭಾಗಗಳಲ್ಲಿ ಸಾಧಾರಣ ಮಳೆಯಾಗಲಿದೆ.

ಆದರೆ ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಸದ್ಯಕ್ಕೆ ಒಣ ಹವೆ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ದಕ್ಷಿಣ ಒಳನಾಡಿನ ಜೊತೆಗೆ ಉತ್ತರ ಕರ್ನಾಟಕದ ಕೆಲವು ಜಿಲ್ಲೆಗಳಿಗೂ ಅಲರ್ಟ್ ನೀಡಲಾಗಿದೆ.

ಗುಡುಗು, ಮಿಂಚು ಮತ್ತು ಬಿರುಗಾಳಿ ಸಹಿತ ಮಳೆಯಾಗುವ ಸಾಧ್ಯತೆ. ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಬಳ್ಳಾರಿ, ಚಿತ್ರದುರ್ಗ, ದಾವಣಗೆರೆ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ನಗರ ಮತ್ತು ಗ್ರಾಮಾಂತರ, ರಾಮನಗರ, ಮಂಡ್ಯ, ಮೈಸೂರು, ಚಾಮರಾಜನಗರ, ಕೊಡಗು, ಹಾಸನ, ಚಿಕ್ಕಮಗಳೂರು, ದಕ್ಷಿಣ ಕನ್ನಡಕ್ಕೆ ಯೆಲ್ಲೋ ಅಲರ್ಟ್ ನೀಡಲಾಗಿದೆ.

